5. ವೈದ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ, ಅರಕೇರಾ-ದೂ-

6. ವೈದ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ, ಕೊಪ್ಪರ -ದೂ-

7. ವೈದ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ, ಜಾಲಹಳ್ಳಿ (ಗುತ್ತಿಗೆ ವೈದ್ಯರನ್ನು ನೇಮಿಸಿದ್ದು, ಇನ್ನೂ ಹಾಜರಾಗಿರುವುದಿಲ್ಲ)

ಸಿಂಧನೂರಿನ ಸರ್ಕಾರಿ ಪ್ರಾಥಮಿಕ ಶಾಲೆ.

408 - ಶ್ರೀ ಕೆ. ವಿರೂಪಾಕ್ಷಪ್ಪ (ಸಿಂಧನೂರು) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಿಂಧನೂರು ನಗರದಲ್ಲಿರುವ ಸರ್ವೆ ನಂ. 768-3 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ವ್ಯಾಪ್ತಿ ಎಷ್ಟು?

ಆ) ಈ ಜಾಗ ಎಷ್ಟು ವರ್ಷಗಳಿಂದ ಸರ್ಕಾರದ ಸ್ವಾಧೀನದಲ್ಲಿದೆ?

ಇ) ಈ ಜಾಗವನ್ನು ಅತಿಕ್ರಮ ಮಾಡಿರುವ ವಿಷಯ ಸರ್ಕಾರದವರ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ, ಅತಿಕ್ರಮವಾದ ಜಾಗ ಎಷ್ಟು, ಹಾಗೂ ಇದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು) :

ಅ) ಎಕರೆಯಷ್ಟು ಇರುತ್ತದೆ.

ಆ) 1954ರಿಂದ ದಾಖಲೆಯಲ್ಲಿರುವಂತೆ ಶಿಕ್ಷಣ ಇಲಾಖೆಯ ವಶದಲ್ಲಿದೆ.

ಇ) ಇಲ್ಲ, ಈ ಜಮೀನು ಕುರಿತು ನ್ಯಾಯಾಲಯದಲ್ಲಿ ಪ್ರಕರಣ ಬಾಕಿಯಿದೆ.

ಕುವೆಂಪು ವಿಶ್ವವಿದ್ಯಾನಿಲಯದಲ್ಲಿ ಎಂ.ಕಾಂ ಸ್ನಾತಕೋತ್ತರ ಪದವಿ.

409 - ಶ್ರೀ ಕೆ.ಎಸ್. ಈಶ್ವರಪ್ಪ (ಶಿವಮೊಗ್ಗ) : ಮಾನ್ಯ ಉನ್ನತ ಶಿಕ್ಷಣ ಸಚಿವರು, ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿವಮೊಗ್ಗದಲ್ಲಿ ಸ್ನಾತಕೋತ್ತರ ಪದವಿ ಎಂ.ಕಾಂ. ತರಗತಿ ನಡೆಸಲು ಅನುಮತಿ ಕೊಡುವ ಬಗ್ಗೆ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ,

ಆ) ಹಾಗಿದ್ದಲ್ಲಿ ಅನುಮತಿ ಯಾವಾಗ ನೀಡಲಾಗುವುದು?

ಶ್ರೀ ಡಿ. ಮಂಜುನಾಥ (ಉನ್ನತ ಶಿಕ್ಷಣ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.